Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
www.klsvdit.edu.in principal@klsvdit.edu.in

Date: 12-08-2022

**ಪತ್ರಿಕಾ ಪ್ರಕಟಣೆ:**

## ಟೊಯೋಟಾ ಕಿರ್ಲೋಸ್ಕರ್ ಮೋಟರ್ಸ್ ನ ಸೆಂಟರ್ ಆಫ್ ಎಕ್ಸಲೆನ್ಸ್ ಉದ್ಘಾಟನೆ

ಕೆ.ಎಲ್.ಎಸ್. ವಿ.ಡಿ.ಐ.ಟಿ. ಹಳಿಯಾಳದಲ್ಲಿ ಟೊಯೋಟಾ ಕಿರ್ಲೋಸ್ಕರ್ ಮೋಟರ್ಸ್(ಟಿ. ಕೆ.ಎಂ) ಬೆಂಗಳೂರು ಇವರು ಸ್ಥಾಪಿಸಿರುವ "ಸೆಂಟರ್ ಆಫ್ ಎಕ್ಸಲೆನ್ಸ್" ನ್ನು ಆಗಸ್ಟ್ 12 ರ ಬೆಳಿಗ್ಗೆ 11 ಗಂಟೆಗೆ ಉದ್ಘಾಟಿಸಲಾಯಿತು. ಸೆಂಟರ್ ಆಫ್ ಎಕ್ಸಲೆನ್ಸ್ ನ್ನು ಉದ್ಘಾಟಿಸಿ ಮಾತನಾಡಿದ ಕಾರ್ಯಕ್ರಮದ ಮುಖ್ಯ ಅತಿಥಿಗಳಾದ ಟೊಯೋಟಾ ಕಿರ್ಲೋಸ್ಕರ್ ನ ಉಪಾಧ್ಯಕ್ಷರಾದ ಶ್ರೀ. ಆರ್. ವೆಂಕಟಕೃಷ್ಣನ್ ಅವರು ವಿದ್ಯಾರ್ಥಿಗಳಿಗೆ ಕಲಿಕಾ ಹಂತದಲ್ಲಿ ಪ್ರಾಯೋಗಿಕ ತರಬೇತಿ ನೀಡಲು ಟಿ.ಕೆ.ಎಂ ಸಂಸ್ಥೆಯು ಆಟೋಮೊಬೈಲ್ ನ ಇಂಜಿನ್ ಅನ್ನು ಮಹಾವಿದ್ಯಾಲಯದಲ್ಲಿರುವ ಸೆಂಟರ್ ಆಫ್ ಎಕ್ಸಲೆನ್ಸ್ ಕೇಂದ್ರಕ್ಕೆ ನೀಡಿದೆ. ಇದರ ಮೂಲ ಉದ್ದೇಶವು ವಿದ್ಯಾರ್ಥಿಗಳು ಆಟೋಮೊಬೈಲ್ ಇಂಜಿನನ್ನು ಪ್ರಾಯೋಗಿಕವಾಗಿ ಪರೀಕ್ಷಿಸಿ, ಆಳವಾದ ಜ್ಞಾನ ಹೊಂದುವುದಾಗಿದೆ. ವಿದ್ಯಾರ್ಥಿಗಳಿಗೆ ಸಕ್ರಿಯ ಕಲಿಕಾ ಪೂರಕ ವಾತಾವರಣ ನಿರ್ಮಿಸುವ ಸಲುವಾಗಿ ತಮ್ಮ ಸಂಸ್ಥೆಯು ಮಹಾವಿದ್ಯಾಲಯದೊಂದಿಗೆ ಒಡಂಬಡಿಕೆ ಮಾಡಿಕೊಂಡಿದೆ ಎಂದು ಹೇಳಿದರು. ಆಟೋಮೊಬೈಲ್ ಕೈಗಾರಿಕಾ ಕ್ಷೇತ್ರ ಬಯಸುವ ಕೌಶಲ್ಯಗಳನ್ನು ವಿದ್ಯಾರ್ಥಿಗಳಿಗೆ ನೀಡಲು ಟಿ.ಕೆ.ಎಂ ಸಂಸ್ಥೆಯು ಉತ್ಸುಕವಾಗಿದ್ದು, ವಿದ್ಯಾರ್ಥಿಗಳು ಇದರ ಲಾಭ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು. ಟೊಯೋಟಾ ಕಿರ್ಲೋಸ್ಕರ್ ಸಂಸ್ಥೆ ಇದುವರೆಗೆ 17 ಸೆಂಟರ್ ಆಫ್ ಎಕ್ಸಲೆನ್ಸ್ ಅನ್ನು ಸ್ಥಾಪಿಸಿದ್ದು, ಇವುಗಳಲ್ಲಿ ವಿ. ಡಿ. ಐ. ಟಿ. ಯಲ್ಲಿ ಸ್ಥಾಪಿಸಿರುವ ಕೇಂದ್ರ ಉತ್ತಮವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದ ಮಹಾವಿದ್ಯಾಲಯದ ಆಡಳಿತ ಮಂಡಳಿಯ ಅಧ್ಯಕ್ಷರಾದ ಶ್ರೀ. ವಿನಾಯಕ ಲೋಕುರ್ ಅವರು ಟೊಯೋಟಾ ಕಿರ್ಲೋಸ್ಕರ್ ಮೋಟರ್ಸ್ ನಮ್ಮ ಮಹಾವಿದ್ಯಾಲಯದೊಂದಿಗೆ ಒಡಂಬಡಿಕೆ ಮಾಡಿಕೊಂಡಿರುವುದು ಅತೀವ ಸಂತಸ ತಂದಿದೆ ಎಂದು ಹೇಳಿದರು. ಆಟೋಮೊಬೈಲ್ ಕ್ಷೇತ್ರದಲ್ಲಿ ತನ್ನದೇ ಆದ ಛಾಪು ಮೂಡಿಸಿರುವ ಟಿ.ಕೆ.ಎಂ. ತನ್ನ ಸೆಂಟರ್ ಆಫ್ ಎಕ್ಸಲೆನ್ಸ್ ನ್ನು ಮಹಾವಿದ್ಯಾಲಯದಲ್ಲಿ ಸ್ಥಾಪಿಸಿ ಶಿಕ್ಷಣ ಕ್ಷೇತ್ರದಲ್ಲೂ ತಮ್ಮ ವ್ಯಾಪ್ತಿಯನ್ನು ವಿಸ್ತರಿಸುತ್ತಿರುವುದು ಶ್ಲಾಘನೀಯವೆಂದು ಹೇಳಿದರು. ಟಿ.ಕೆ.ಎಂ. ಗೆ ಮಹಾವಿದ್ಯಾಲಯವು ಆಭಾರಿಯಾಗಿದೆ ಎಂದು ಇದೇ ಸಂದರ್ಭದಲ್ಲಿ ನುಡಿದರು. ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ವಿ.ಎ.ಕುಲಕರ್ಣಿ ಅವರು ಸಭಿಕರನ್ನು ಸ್ವಾಗತಿಸುತ್ತಾ, ಮುಖ್ಯ ಅತಿಥಿಗಳ ಕಿರು ಪರಿಚಯ ಮಾಡಿದರು. ಶ್ರೀ. ವೆಂಕಟಕೃಷ್ಣನ್ ಹಾಗೂ ಟಿ.ಕೆ.ಎಂ. ನ ಅಧಿಕಾರಿಗಳು ಮಹಾವಿದ್ಯಾಲಯಕ್ಕೆ ಭೇಟಿ ನೀಡಿರುವುದು ಹರ್ಷ ತಂದಿದೆ ಎಂದು ಹೇಳಿದರು. ವಿದ್ಯಾರ್ಥಿಗಳು ಸೆಂಟರ್ ಆಫ್ ಎಕ್ಸಲೆನ್ಸ್ ನ ಸದುಪಯೋಗ ಪಡೆದುಕೊಳ್ಳಬೇಕೆಂದು ಕರೆ ನೀಡಿದರು. ಈ ಕಾರ್ಯಕ್ರಮದಲ್ಲಿ ಬೆಂಗಳೂರಿನ ಟಿ.ಕೆ.ಎಂ. ನ ಹಿರಿಯ ವ್ಯವಸ್ಥಾಪಕರಾದ ಶ್ರೀ.ಹೆಚ್.ಜೆ.ಕಿರಣ್ ಅವರು ಉಪಸ್ಥಿತರಿದ್ದರು. ಟೊಯೋಟಾ ಕಿರ್ಲೋಸ್ಕರ್ ಮೋಟರ್ಸ್ ಅಭಿವೃದ್ಧಿಪಡಿಸುವ ಇನ್ನೋವಾ ಹಾಗೂ ಇಟಿಯೋಸ್ ಕಾರಿನ ಇಂಜಿನ್ ಮತ್ತು ಗೇರ್ ಬಾಕ್ಸ್ ಅನ್ನು ಮಹಾವಿದ್ಯಾಲಯಕ್ಕೆ ಕೊಡುಗೆಯಾಗಿ ನೀಡಿದ್ದು, ಇದನ್ನು ಸೆಂಟರ್ ಆಫ್ ಎಕ್ಸಲೆನ್ಸ್ ನಲ್ಲಿ ವಿದ್ಯಾರ್ಥಿಗಳ ಕಲಿಕೆಗೆ ಇಡಲಾಗಿದೆ.

ಇದೇ ಸಂದರ್ಭದಲ್ಲಿ ಮಹಾವಿದ್ಯಾಲಯದ ಕಂಪ್ಯೂಟರ್ ಸೈನ್ಸ್ ವಿಭಾಗದ ಅಂತಿಮ ವರ್ಷದ ವಿದ್ಯಾರ್ಥಿಗಳಾದ ಕು. ಮನೋಜ್ ಎಂ ಮತ್ತು ಕುಮಾರಿ. ನವ್ಯಶ್ರೀ ಕೆ ಅಭಿವೃದ್ಧಿಪಡಿಸಿರುವ ವಸತಿಗೃಹ ನಿರ್ವಹಣೆ ಸಾಫ್ಟ್‌ವೇರ್ ಗೆ ಮುಖ್ಯ ಅತಿಥಿಗಳು ಚಾಲನೆ ನೀಡಿದರು. ಆಜಾದಿ ಕಾ ಅಮೃತ ಮಹೋತ್ಸವದ ಪ್ರಯುಕ್ತ ಮಹಾವಿದ್ಯಾಲಯದ ಎನ್.ಎಸ್.ಎಸ್. ಘಟಕದ ವತಿಯಿಂದ ರಾಷ್ಟ್ರಧ್ವಜ ವಿತರಣಾ ಕಾರ್ಯಕ್ರಮವನ್ನು ಇದೇ ಸಂದರ್ಭದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಟ್ರೈನಿಂಗ್ ಅಂಡ್ ಪ್ಲೇಸ್ಮೆಂಟ್ ವಿಭಾಗದ ಸಂಚಾಲಕರಾದ ಪ್ರೊ. ರಜತ್ ಆಚಾರ್ಯ ವಂದಿಸಿದರು. ಕುಮಾರಿ. ಸಿಮ್ರನ್ ಮುಲ್ಲಾ ನಿರೂಪಿಸಿದರು. ಮಹಾವಿದ್ಯಾಲಯದ ಎಲ್ಲಾ ಡೀನ್, ಮುಖ್ಯಸ್ಥರು, ಬೋಧಕ ಬೋಧಕೇತರ ಸಿಬ್ಬಂದಿಗಳು ಮತ್ತು 150ಕ್ಕೂ ಅಧಿಕ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಪ್ರಾಂಶುಪಾಲರು

**Principal**
KLS Vishwanathrao Deshpande
Institute of Technology, Haliyal


Dr. V. A. Kulkarni




CENTRE OF EXCELLENCE
Inaugurated by
R. Venkatakrishnan
Shri Pradeep Sawkar
Chairman, KLS
on 12th August 2022
JNANA SUDHA


NOTICE BOARD
JOURNALS/PERIODICALS
Karnatak Law Society's
VISHWANATHRAO DESHPANDE INSTITUTE OF TECHNOLOGY
Haliyal, Uttara Kannada Dist. Karnataka – 581319